ದಿನಾಂಕ: 8–7–2009 ರಂದು ನಡೆದ ಮಂಡಳಿ ಸಭೆಯಲ್ಲಿ ಅನುಮೋದನೆಯನ್ನು ಪಡೆಯಲಾಗಿದೆ.

ಇ) ಬಸ್ ನಿಲ್ದಾಣದ ಕಾಮಗಾರಿಯನ್ನು ಶೀಘ್ರವಾಗಿ ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುವುದು.

277 ಶ್ರೀ ಮಹೇಶ್ ಎಸ್.ಆರ್. (ಕೃಷ್ಣರಾಜನಗರ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಇತ್ತೀಚೆಗೆ ನಡೆದ ಅವ್ಯವಹಾರಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು? (ವಿವರಗಳನ್ನು ನೀಡುವುದು);

ಆ) ಈ ಅವ್ಯವಹಾರಗಳನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

ಇ) ಕರ್ನಾಟಕ ಲೋಕಸೇವಾ ಆಯೋಗದಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳ ತನಿಖೆಯ ಪ್ರಗತಿಯು ಯಾವ ಹಂತದಲ್ಲಿದೆ;

ಈ) ಈ ಅವ್ಯವಹಾರಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ರೀತಿ ಕ್ರಮ ಜರುಗಿಸಿದೆ;

ಉ) ಹಾಗಿಲ್ಲದಿದ್ದಲ್ಲಿ, ಅವ್ಯವಹಾರಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಯಾವಾಗ ಕ್ರಮ ಜರುಗಿಸಲಾಗುವುದು?

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಯವರು) :

ಅ) ಇತ್ತೀಚೆಗೆ ಯಾವುದೇ ಅವ್ಯವಹಾರಗಳು ನಡೆದಿರುವುದಿಲ್ಲ.

ಆ) ಮೇಲ್ಕಂಡ ಪ್ರಶ್ನೆ (ಅ)ಗೆ ನೀಡಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) –ಅದೇ–

ಈ) –ಅದೇ–

ಉ) ಅನ್ವಯಿಸುವುದಿಲ್ಲ.

543 ಶ್ರೀ ಮಂಜು.ಎ (ಅರಕಲಗೂಡು) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅರಕಲಗೂಡು ಪಟ್ಟಣದಲ್ಲಿ ಅಗ್ನಿಶಾಮಕ ಕೇಂದ್ರ ತೆರೆಯುವ ಉದ್ದೇಶ ಸರ್ಕಾರದ ಮುಂದಿದೆಯೇ;